# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 98 (106)
2. ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)
   (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 07.12.2020 (ಕಾರ್ಮಿಕ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ)
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ನಂಜನಗೂಡು ತಾಲ್ಲೂಕು ಹಿಮ್ಮಾವು ಬಳಿ ಇರುವ ಏಷಿಯನ್ ಪೇಂಟ್ಸ್ ಕಾರ್ಖಾನೆಯ ಸ್ಥಾಪನೆಗೆ ಭೂಮಿಯನ್ನು ನೀಡಿದ್ದ ಸುಮಾರು 63 ರೈತಾಪಿ ಕುಟುಂಬಗಳಿಗೆ, ಕಾರ್ಖಾನೆಯವರು ಕುಟುಂಬಕ್ಕೆ ಒಂದು ಉದ್ಯೋಗ ಒದಗಿಸುವ ಭರವಸೆಯನ್ನು ನೀಡಲಾಗುತ್ತಿದೆಯೇ; ನೀಡಿದ್ದಲ್ಲಿ, ಎಷ್ಟು ಕುಟುಂಬಗಳ ಸದಸ್ಯರಿಗೆ ಇದುವರೆಗೆ ಉದ್ಯೋಗ ಒದಗಿಸಲಾಗಿದೆ; (ವಿವರ ಒದಗಿಸುವುದು) | ಕರ್ನಾಟಕ ಕೈಗಾರಿಕಾ ನೀತಿ 2014-19ರ ಸರ್ಕಾರದ ಆದೇಶ ಸಂಖ್ಯೆ: ಸಿಐ 58 ಎಸ್‌ಪಿಐ 2013, ದಿನಾಂಕ: 01.10.2014ರಂತೆ ಏಷಿಯನ್ ಪೇಂಟ್ಸ್ ಕಾರ್ಖಾನೆಗೆ ಭೂಮಿ ನೀಡಿರುವ ರೈತ ಕುಟುಂಬಗಳ ಸದಸ್ಯರಲ್ಲಿ ಒಬ್ಬರಿಗೆ ಉದ್ಯೋಗ ನೀಡಬೇಕೆಂಬ ನಿಬಂಧನೆ ಇದ್ದು, ಅದರಂತೆ ಕಂಪನಿಯು ಒಟ್ಟು 95 ಜನರಿಗೆ ಉದ್ಯೋಗ ನೀಡಬೇಕಾಗಿರುತ್ತದೆ.<br><br>ಈ ಪೈಕಿ 53 ಜನರಿಗೆ ಏಷಿಯನ್ ಪೇಂಟ್ಸ್ ಮುಖ್ಯ ಘಟಕದಲ್ಲಿ ಬೇಕಾಗಿರುವ ಅಗತ್ಯವಾದ ವಿದ್ಯಾಭ್ಯಾಸ, ನೈಪುಣ್ಯತೆ ಅಥವಾ ಅನುಭವ ಇಲ್ಲದೇ ಇರುವುದರಿಂದ ಏಷಿಯನ್ ಪೇಂಟ್ಸ್ ಕಂಪನಿಯ ಇಮ್ಮಾವು ಘಟಕದಲ್ಲಿ ಉದ್ಯೋಗ ನೀಡಲು ಅಸಾಧ್ಯವೆಂದು ತಿಳಿಸಿ, ಮೈಸೂರು ತಾಲ್ಲೂಕು, ಬೆಳಗೊಳ ಜಿ.ಸಿ.ಕೆ. ಇಂಡಸ್ಟ್ರಿಯಲ್ ಪಾರ್ಕ್‌ನಲ್ಲಿ ಹೆಲ್ತ್ ಅಂಡ್ ಹೈಜಿನ್ ಉತ್ಪನ್ನಗಳ ತಯಾರಿಕಾ ಘಟಕದಲ್ಲಿ ಉದ್ಯೋಗ ನೀಡಲು ಆದೇಶ ನೀಡಲಾಗಿದೆ. 3 ಜನರ ದಾಖಲಾತಿಗಳು ಸರಿಯಿಲ್ಲದ ಕಾರಣ ತಿರಸ್ಕರಿಸಲಾಗಿದೆ. 17 ಜನರು ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. |

| | | |
|---|---|---|
| (ಆ) | ಇದುವರೆಗೆ ಭೂಮಿ ಕಳೆದುಕೊಂಡ ರೈತ ಕುಟುಂಬಗಳಿಗೆ ಉದ್ಯೋಗ ಒದಗಿಸದಿರಲು ಕಾರಣವೇನು; ಈ ಬಗ್ಗೆ ಕಾರ್ಮಿಕ ಇಲಾಖೆ, ಉದ್ಯೋಗ ಮತ್ತು ತರಬೇತಿ ಇಲಾಖೆಯ ಉನ್ನತ ಅಧಿಕಾರಿಗಳು, ಜಿಲ್ಲಾಧಿಕಾರಿಯವರು, ರೈತರರ ಪ್ರತಿನಿಧಿಗಳ ಮತ್ತು ಕಾರ್ಖಾನೆಯವರ ಜೊತೆ ಸಭೆ ನಡೆಸಿ, ಈ ಸಮಸ್ಯೆಗೆ ಪರಿಹಾರ ಕಂಡುಕೊಂಡು ರೈತಾಪಿ ಮಕ್ಕಳಿಗೆ ಉದ್ಯೋಗ ಒದಗಿಸಲು ಕ್ರಮ ಜರುಗಿಸಲಾಗುವುದೇ? | ದಾಖಲಾತಿಗಳನ್ನು ಸಲ್ಲಿಸಿದಲ್ಲಿ, ಉದ್ಯೋಗ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು. ಉಳಿದ 22 ಜನರು ಒಂದೇ ಕುಟುಂಬಕ್ಕೆ ಸೇರಿದವರಾಗಿರುತ್ತಾರೆ ಎಂದು ಏಷಿಯನ್ ಪೇಂಟ್ಸ್ ಪ್ರತಿನಿಧಿಗಳು ಜಿಲ್ಲಾಧಿಕಾರಿ, ಮೈಸೂರು, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಿಳಿಸಿರುತ್ತಾರೆ.<br><br>ಜಿಲ್ಲಾಧಿಕಾರಿ, ಮೈಸೂರು, ಇವರ ಅಧ್ಯಕ್ಷತೆಯಲ್ಲಿ ಕೆ.ಐ.ಎ.ಡಿ.ಬಿ.ಯ ಅಧಿಕಾರಿಗಳು ಹಾಗೂ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ ಇವರುಗಳನ್ನು ಒಳಗೊಂಡಂತೆ ರೈತ ಪ್ರತಿನಿಧಿಗಳ ಜೊತೆ ಈ ಬಗ್ಗೆ ಹಲವಾರು ಸಭೆಗಳನ್ನು ನಡೆಸಲಾಗಿದ್ದು, ಆದರೆ ಏಷಿಯನ್ ಪೇಂಟ್ಸ್ ಕಾರ್ಖಾನೆಯ ಆಡಳಿತ ವರ್ಗವು ಬೆಳಗೊಳ ಸ್ಯಾನಿಟೈಸರ್ ತಯಾರಿಕಾ ಘಟಕದಲ್ಲಿ ಮಾತ್ರ ಉದ್ಯೋಗ ನೀಡುವುದಾಗಿ ತಿಳಿಸಿರುತ್ತದೆ.<br><br>ಆದರೆ, ಭೂಮಿ ಕಳೆದೊಕೊಂಡಿರುವವರು ಈ ಬದಲಿ ವ್ಯವಸ್ಥೆಯನ್ನು ತಿರಸ್ಕರಿಸಿ, ಕಾರ್ಖಾನೆಯ ಮುಂದೆ ಧರಣಿ ನಡೆಸುತ್ತಿದ್ದಾರೆ. |

ಸಂಖ್ಯೆ: ಸಿಐ 212 ಐಎಪಿ (ಇ) 2020

(ಜಗದೀಶ ಶೆಟ್ಟರ)

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು